# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಆಟಿಸಂ, ಸೆರಬ್ರಲ್ ಪಾಲ್ಸಿ, ಬುದ್ಧಿಮಾಂದ್ಯತೆ ಮತ್ತು ಬಹುವಿಧದ ವೈಕಲ್ಯ ಹೊಂದಿರುವ ಮಕ್ಕಳಿಗಾಗಿ 4 ವಿಭಾಗಗಳಲ್ಲಿ ಹಗಲು ಯೋಗಕ್ಷೇಮ ಕೇಂದ್ರಗಳನ್ನು ವಿಭಾಗಕ್ಕೆ ಒಂದರಂತೆ ವಿಸ್ತರಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಮಮಇ/268/ಪಿಹೆಚ್‌ಪಿ/2013 ದಿ:28.08.2013
2. ಸರ್ಕಾರದ ಆದೇಶ ಸಂಖ್ಯೆ:ಮಮಇ/106/ಪಿಹೆಚ್‌ಪಿ/2014 ದಿ:13.06.2014
3. ನಿರ್ದೇಶಕರು ವಿ.ಹಿ.ನಾ.ಸ.ಇಲಾಖೆ ಇವರ ಏಕ ಕಡತ ಇಸಿ/ಸಿ.2/ಯೋಜನೆ/ಸೆ.ಆ.ಹ.ಪಾ.ಕೇ./1.2017–18

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರದ ಆದೇಶ ಸಂಖ್ಯೆ: ಮಮಇ/268/ಪಿಹೆಚ್‌ಪಿ/2013 ದಿ:28.08.2013 ರಂತೆ 6 ರಿಂದ 18ವರ್ಷದ ವಯೋಮಾನದವರಿಗೆ ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಹಾಗೂ ತೀವ್ರತೆರನಾದ ವಿಕಲಚೇತನ ಮಕ್ಕಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನ ಪ್ರಾಯೋಗಿಕವಾಗಿ ಬೆಂಗಳೂರು ನಗರದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಸ್ಥಾಪಿಸಲು ಹಾಗೂ ಈ ಕೇಂದ್ರಗಳನ್ನು ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ರಾಜ್ಯ ಅನುದಾನಕ್ಕೊಳಪಡಿಸಲು ಪ್ರತಿ ಕೇಂದ್ರದಲ್ಲಿ ಕನಿಷ್ಠ 25 ಮಕ್ಕಳಿಗೆ ಮಾಹೆಯಾನ ರೂ.2500/- ರಂತೆ ಆಯವ್ಯಯವನ್ನು ಭರಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2)ರ ಸರ್ಕಾರದ ಆದೇಶ ಸಂಖ್ಯೆ ಮಮಇ/106/ಪಿಹೆಚ್‌ಪಿ/2014 ದಿ:13.06.2014 ರಂತೆ 2014–15ನೇ ಸಾಲಿನ ಆಯವ್ಯಯದಲ್ಲಿ ನಗರ ಪ್ರದೇಶದಲ್ಲಿನ 3 ವರ್ಷಕ್ಕಿಂತ ಮೇಲ್ಪಟ್ಟ ವಯೋಮಾನದ ಮಾನಸಿಕ ಅಸ್ವಸ್ಥ ಸೆರಬ್ರಲ್ ಪಾಲ್ಸಿ, ಆಟಿಸಂ ಹಾಗೂ ತೀವ್ರತೆರನಾದ ವಿಕಲಚೇತನ ಮಕ್ಕಳಿಗೆ 2 ಹಗಲು ಯೋಗಕ್ಷೇಮ ಕೇಂದ್ರಗಳಲ್ಲಿನ ಒಂದು ಮಗುವಿಗೆ ಮಾಹೆಯಾನ ಪ್ರಸ್ತುತ ನೀಡುತ್ತಿರುವ 2500/- ಗಳಿಂದ ರೂ.10.000/- ಗಳಿಗೆ ಹೆಚ್ಚಿಸಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿರುತ್ತದೆ. ಅದರಂತೆ ಬೆಂಗಳೂರು ನಗರದಲ್ಲಿ 2014–15ನೇ ಸಾಲಿನಿಂದ 2ಹಗಲು ಯೋಗಕ್ಷೇಮ ಕೇಂದ್ರಗಳು ಕರ್ತವ್ಯ ನಿರ್ವಹಿಸುತ್ತಿರುತ್ತವೆ.

ಮೇಲೆ ಓದಲಾದ ಕ್ರಮಾಂಕ (3) ರ ಏಕ ಕಡತದಲ್ಲಿ 2017–18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಆಟಿಸಂ, ಸೆರಬ್ರಲ್ ಪಾಲ್ಸಿ, ಬುದ್ಧಿಮಾಂದ್ಯತೆ ಮತ್ತು ಬಹುವಿಧದ ವೈಕಲ್ಯ ಹೊಂದಿರುವ ಮಕ್ಕಳಿಗಾಗಿ 4 ವಿಭಾಗಗಳಲ್ಲಿ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಘೋಷಿಸಿರುತ್ತಾರೆ. ಈ ಹಿನ್ನಲೆಯಲ್ಲಿ ಹಾಲಿ 2 ಹಗಲು ಯೋಗಕ್ಷೇಮ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿರುವ ಬೆಂಗಳೂರು ನಗರ ಜಿಲ್ಲೆಯನ್ನು ಹೊರತುಪಡಿಸಿ, ರಾಜ್ಯದ 4 ವಿಭಾಗಗಳಾದ ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗದ ಆಯ್ದ ಜಿಲ್ಲಾ ಕೇಂದ್ರಗಳಲ್ಲಿ ತಲಾ ಒಂದರಂತೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಲೆಕ್ಕ ಶೀರ್ಷಿಕೆ 2235–02–101–0–99 ಯೋಜನೆ ಉಪ ಲೆಕ್ಕಶೀರ್ಷಿಕೆ:103, 422 ಹಾಗೂ 423ರಡಿ 2017–18ನೇ ಸಾಲಿಗೆ ಲಭ್ಯವಿರುವ ಆಯವ್ಯಯದಲ್ಲಿ ಅನುಷ್ಠಾನಗೊಳಿಸಲು ಯೋಜನೆಯ ಪರಿಷ್ಕರಣೆ ಹಾಗೂ ಸವಿವರ ವೆಚ್ಚಕ್ಕೆ ಸರ್ಕಾರದ ಅನುಮೋದನೆಯೊಂದಿಗೆ ಸೂಕ್ತ ಆದೇಶ ಹೊರಡಿಸಲು ನಿರ್ದೇಶಕರು ವಿ.ಹಿ.ನಾ.ಸ.ಇಲಾಖೆ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಮಮಇ 91 ಪಿಹೆಚ್‌ಪಿ 2017, ಬೆಂಗಳೂರು, ದಿ:12.05.2017**

ಮೇಲಿನ ಪ್ರಸ್ತಾವನೆಯ ವಿವರಣೆಗಳ ಹಿನ್ನೆಲೆಯಲ್ಲಿ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಆಟಿಸಂ, ಸೆರಬ್ರಲ್ ಪಾಲ್ಸಿ, ಬುದ್ಧಿಮಾಂದ್ಯತೆ ಮತ್ತು ಬಹುವಿಧದ ವೈಕಲ್ಯ ಹೊಂದಿರುವ ಮಕ್ಕಳಿಗಾಗಿ 4 ವಿಭಾಗಗಳಲ್ಲಿ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಘೋಷಿಸಿರುತ್ತಾರೆ. ಈ ಹಿನ್ನಲೆಯಲ್ಲಿ ಹಾಲಿ 2 ಹಗಲು ಯೋಗಕ್ಷೇಮ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿರುವ ಬೆಂಗಳೂರು ನಗರ ಜಿಲ್ಲೆಯನ್ನು ಹೊರತುಪಡಿಸಿ, ರಾಜ್ಯದ 4 ವಿಭಾಗಗಳಾದ ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗದ ಆಯ್ದ ಜಿಲ್ಲಾ ಕೇಂದ್ರಗಳಲ್ಲಿ ತಲಾ ಒಂದರಂತೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಲೆಕ್ಕ ಶೀರ್ಷಿಕೆ 2235-02-101-0-99 (ದೈಹಿಕವಾಗಿ ಮತ್ತು ಮಾನಸಿಕವಾಗಿ ಸವಾಲಿಗೊಳಗಾದವರ ಕಲ್ಯಾಣ) ಅಡಿ 2017-18ನೇ ಸಾಲಿಗೆ ಲಭ್ಯವಿರುವ ಆಯವ್ಯಯದಲ್ಲಿ ಯೋಜನಾ ಮಾರ್ಗಸೂಚಿಗಳನ್ವಯ ನಿಯಮಾನುಸಾರ ಪಾರದರ್ಶಕತೆಯನ್ವಯ ಯೋಜನೆಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಈ ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆ, ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 224 ವೆಚ್ಚ-10 2017, ದಿನಾಂಕ:22.04.2017 ಮತ್ತು ಪಿಡಿ 70 ಐಎಂಎಂ 2017 ದಿನಾಂಕ:27.04.2017ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

12/5/2017
(ಜಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಪ್ರತಿಗಳು:

1. ಪ್ರಧಾನ ಮಹಾಲೇಖಪಾಲರು, (ಜಿ &ಎಸ್‌ಎಸ್‌ಎ) ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು, (ಇ & ಆರ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಎ & ಇ ) ಕರ್ನಾಟಕ, ಹೊಸ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
5. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
7. ಸರ್ಕಾರದ ಅಧೀನ. ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

10. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಉಪಕಾರ್ಯದರ್ಶಿರವರು, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು
12. ಸರ್ಕಾರದ ಅಧೀನ ಕಾರ್ಯದರ್ಶಿ–1, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಶಾಖಾಧಿಕಾರಿ, ಸ್ಕೀಮರ ಶಾಖೆ, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
14. ಶಾಖಾ ರಕ್ಷಾ ಕಡತ/ಒ.ಡಿ.ಜಿ.ಸಿ/ಸೂಚನಾ ಫಲಕ/ಹೆಚ್ಚುವರಿ ಪ್ರತಿಗಳು.